# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 41 | Pages. 2 | Date: 09-01-2026, FRIDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 41 – ಪುಟಗಳು : 2 | 09-01-2026 | ಶುಕ್ರವಾರ | Ph: 8762954248 | ದರ : ₹1


# ಜೆಡಿಎಸ್ ಸಮಾವೇಶಕ್ಕೆ ಭರ್ಜರಿ ಸಿದ್ಧತೆ

## ಹಿರಿಯರು ಸೂಚಿಸಿದ ಕ್ಷೇತ್ರದಲ್ಲಿ ಸ್ಪರ್ಧಿಸುವೆ | ಮಾಜಿ ಸಚಿವ ಹೆಚ್.ಡಿ.ರೇವಣ್ಣ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜ. 24 ರಂದು ಹಮ್ಮಿಕೊಂಡಿರುವ ಜೆಡಿಎಸ್ ಬೃಹತ್ ಸಮಾವೇಶಕ್ಕೆ ಪೂರ್ವ ಸಿದ್ಧತೆಗಳು ನಡೆಯುತ್ತಿವೆ ಎಂದು ಮಾಜಿ ಸಚಿವ ಹೆಚ್.ಡಿ.ರೇವಣ್ಣ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಗುರುವಾರ ಮಾತನಾಡಿ, ಸಮಾವೇಶದಲ್ಲಿ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಹೆಚ್.ಡಿ.ದೇವೇಗೌಡ, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ವಿರೋಧ ಪಕ್ಷದ ನಾಯಕ ಸುರೇಶ್ ಬಾಬು, ಪರಿಷತ್ ವಿಪಕ್ಷ ನಾಯಕ ಭೋಜೇಗೌಡ, ಮಾಜಿ ಸಚಿವರು, ಶಾಸಕರು, ಮಾಜಿ ಶಾಸಕರು ಭಾಗಿಯಾಗಲಿದ್ದಾರೆ ಎಂದರು.

ಸಮಾವೇಶದ ಉದ್ದೇಶ ಈ ಸರ್ಕಾರ ಅಧಿಕಾರಕ್ಕೆ ಬಂದು ಎರಡೂವರೆ ವರ್ಷ ಕಳೆದಿದ್ದರೂ ಯಾವುದೇ ಅಭಿವೃದ್ಧಿ ಕೆಲಸ ಆಗಿಲ್ಲ. ಜಿಲ್ಲೆಗೆ ಈ ಸರ್ಕಾದ ಕೊಡುಗೆ,



### ಜಿಲ್ಲೆಗೆ ನಮ್ಮ ಕೊಡುಗೆ ಅಧಿಕ

ದೇವೇಗೌಡರು, ಕುಮಾರಸ್ವಾಮಿ, ನಾನು ಸೇರಿದಂತೆ ನಮ್ಮ ಪಕ್ಷದ ಕೊಡುಗೆ ಜಿಲ್ಲೆಗೆ ದೊಡ್ಡದಿದೆ. ಅದನ್ನು ಜನರಿಗೆ ಹೇಳುತ್ತೇವೆ. ಈ ಮೂಲಕ ಪ್ರಾದೇಶಿಕ ಉಳಿಸಿ ಎಂದು ಮನವಿ ಮಾಡುತ್ತೇವೆ ಎಂದರು. ನಮ್ಮದು ಪ್ರಾದೇಶಿಕ ಪಕ್ಷ, ನಾಯಕರನ್ನು ಬೆಳೆಸುವ ಪಕ್ಷ, ಆದರೆ ರಾಷ್ಟ್ರೀಯ ಪಕ್ಷದವರು ನಾವು ಬೆಳೆಸಿದವರನ್ನು ಕರೆದುಕೊಂಡು ಹೋಗುತ್ತಾರೆ ಎಂದು ಕುಟುಕಿದರು.

ಸಾಧನೆ ಏನು, ಇದನ್ನು ಜಿಲ್ಲೆಯ ಜನರಿಗೆ ಮನದಟ್ಟು ಮಾಡುವುದು ಮತ್ತು ಗ್ರಾಪಂ, ತಾಪಂ ಮತ್ತು ಜಿಪಂ ಚುನಾವಣೆಗೆ ಪಕ್ಷ ಸಂಘಟನೆ ಮಾಡುವುದಾಗಿದೆ ಎಂದರು.

### ಹಿರಿಯರ ತೀರ್ಮಾನವೇ ಅಂತಿಮ

ರಾಷ್ಟ್ರೀಯ ಅಧ್ಯಕ್ಷರು, ರಾಜ್ಯಾಧ್ಯಕ್ಷರು ಎಲ್ಲಿ ಸ್ಪರ್ಧೆ ಮಾಡು ಎನ್ನುತ್ತಾರೋ ಅಲ್ಲಿ ನಿಲ್ಲುವೆ, ಇದಕ್ಕಾಗಿಯೇ ಸ್ಕ್ರೀನಿಂಗ್ ಕಮಿಟಿ ಇದೆ. ಎಲ್ಲರೂ ಯಾವ ಕ್ಷೇತ್ರಕ್ಕೆ ಟಿಕೆಟ್ ಕೊಡುತ್ತಾರೋ ಅಲ್ಲಿಂದ ಸ್ಪರ್ಧೆ ಮಾಡುವೆ, ನಾನು ಜಿಲ್ಲೆಗೆ ಹೈಕಮಾಂಡ್ ಅಲ್ಲ, ಕಾರ್ಯಕರ್ತರೇ ಹೈಕಮಾಂಡ್, ಪಕ್ಷದ ತೀರ್ಮಾನಕ್ಕೆ ನಾನು ಬದ್ಧ, ಹೊಳೆನರಸೀಪುರದಿಂದ 6 ಬಾರಿ ಶಾಸಕ ಆಗಿದ್ದೇನೆ. ಇಲ್ಲಿನ ಜನರು ನಮ್ಮ ಕುಟುಂಬಕ್ಕೆ ಶಕ್ತಿ ಕೊಟ್ಟಿದ್ದಾರೆ, ಜಿಲ್ಲೆಯ ಬಾಕಿ ಕೆಲಸ ಆಗುವವರೆಗೂ ಎಲ್ಲ ಜನರ ಆಶೀರ್ವಾದದಿಂದ ನಾನು ರಾಜಕೀಯದಲ್ಲಿವೆ ಎಂದ ಅವರು, ಬಿಜೆಪಿ-ಜೆಡಿಎಸ್ ಹೊಂದಾಣಿಕೆ ವಿಚಾರದಲ್ಲಿ ರಾಷ್ಟ್ರೀಯ ಮಟ್ಟದಲ್ಲಿ ಆಗುವ ತೀರ್ಮಾನಕ್ಕೆ ನಾವೆಲ್ಲರೂ ಬದ್ಧ, ಈ ರಾಷ್ಟ್ರ ಉಳಿಯಬೇಕಾದರೆ ಮೋದಿಯವರು ಬೇಕು ಎಂದು ಎಚ್.ಡಿ.ರೇವಣ್ಣ ಹೇಳಿದರು.

ಸುಮಾರು ಒಂದೂವರೆಯಿಂದ 2 ಲಕ್ಷ ಜನ ಸೇರುವ, ಸಮಾವೇಶವನ್ನು ನಗರದ ಬಿಎಂ ರಸ್ತೆ ಪಕ್ಕದ ಕೆಐಎಡಿಬಿಗೆ ಸೇರಿದ ಜಾಗದಲ್ಲಿ ನಡೆಸಲು ಉದ್ದೇಶಿಸಲಾಗಿದೆ. ಅದಕ್ಕಾಗಿ ಅಗತ್ಯ ಶುಲ್ಕ ಸಹ ಪಾವತಿ ಮಾಡಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್, ಮುಖಂಡರಾದ ಗಿರೀಶ್ ಚನ್ನವೀರಪ್ಪ, ಬಿದರಿಕೆರೆ ಜಯರಾಂ ಇದ್ದರು.

# ಕಾಡಾನೆ ಹಾವಳಿ ತಪ್ಪಿಸಲು ಆಗ್ರಹಿಸಿ ಪ್ರತಿಭಟನೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಮಲೆನಾಡು ಭಾಗದಲ್ಲಿ ಹೆಚ್ಚಿರುವ ಕಾಡಾನೆ ಹಾವಳಿ ತಪ್ಪಿಸಲು ಆಗ್ರಹಿಸಿ ಗುರುವಾರ ರೈತರು ಮೂಡಿಗೆರೆ-ಬೇಲೂರು ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು.

ತೊಳಲು ಗ್ರಾಮ ಪಂಚಾಯಿತಿ ವ್ಯಾಪ್ತಿಯ ನವಿಲಹಳ್ಳಿ, ಸಿದ್ದರಹಳ್ಳಿ, ಕಂದಾವರ, ತೊಳಲು ಸೇರಿ ಅಕ್ಕಪಕ್ಕದ ಗ್ರಾಮದಲ್ಲಿ 25ಕ್ಕೂ ಹೆಚ್ಚು ಕಾಡಾನೆಗಳು ಬೀಡು ಬಿಟ್ಟಿವೆ. ಹಲವು ದಿನಗಳಿಂದ ಇಲ್ಲಿಯೇ ಠಿಕಾಣಿ ಹೂಡಿರುವುದರಿಂದ ಅಪಾರ ಪ್ರಮಾಣದ ಬೆಳೆ ನಷ್ಟವಾಗಿರುವುದು ಮಾತ್ರವಲ್ಲದೆ ದಾಳಿ ಭೀತಿಯಿಂದ ಮಕ್ಕಳು ಶಾಲಾ ಕಾಲೇಜಿಗೆ ಹೋಗಲು ಹಿಂದೇಟು ಹಾಕುತ್ತಿದ್ದಾರೆ. ಈ ಬಗ್ಗೆ ಅರಣ್ಯ ಇಲಾಖೆಗೆ ಎಷ್ಟೇ ಮನವಿ ಮಾಡಿದರೂ ಪ್ರಯೋಜನವಾಗಿಲ್ಲ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು. ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಕುಮಾರ್ ಮಾತನಾಡಿ, ನಾಲ್ಕೈದು ದಿನಗಳಿಂದ ಕಾಡಾನೆಗಳ ಉಪಟಳ ಮಿತಿ ಮೀರಿದೆ. ತಿಂಗಳ ಹಿಂದಷ್ಟೇ ಜೋಳ, ಕಾಫಿ, ಅಡಿಕೆ ಮತ್ತು ಇನ್ನಿತರ ಬೆಳೆಗಳನ್ನು ತುಳಿದು ಹಾಳು ಮಾಡಿದ್ದ ಕಾಡಾನೆಗಳು ಈ ಭಾಗದಲ್ಲಿ ಹೆಚ್ಚು ಹಾನಿ ಮಾಡುತ್ತಿವೆ. ಮೂರು ದಿನಗಳಿಂದ ಕೂಲಿ ಕಾರ್ಮಿಕರು ಕೆಲಸಕ್ಕೆ ಬಾರದೆ ಕಾಫಿ ಬೆಳೆ ಸಂಪೂರ್ಣ ಹಾಳಾಗುತ್ತಿದೆ.ಅಧಿಕಾರಿ ಮತ್ತು ಜನಪ್ರತಿನಿಧಿಗಳ ಕಣ್ಣೊರೆಸುವ ಮಾತುಗಳು ಬೇಕಾಗಿಲ್ಲವೆಂದರು. ವೃತ್ತ ನಿರೀಕ್ಷಕ ಜಗದೀಶ್, ಅರಣ್ಯ ಇಲಾಖೆ ಅಧಿಕಾರಿಗಳೊಂದಿಗೆ ಗ್ರಾಮಸ್ಥರು ವಾಗ್ವಾದ ನಡೆಸಿದರು. ವಲಯ ಅರಣ್ಯಾಧಿಕಾರಿ ಯತೀಶ್ ಮಾತನಾಡಿ, ಮಲೆನಾಡು ಭಾಗದಲ್ಲಿ ಕಾಡಾನೆಗಳ ಉಪಟಳ ಹೆಚ್ಚಿದ್ದು ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ಸರ್ಕಾರದ ಮಟ್ಟದಲ್ಲಿ ಚಿಂತನೆ ನಡೆದಿದೆ. ಮುಂದಿನ ಎರಡು ದಿನಗಳಲ್ಲಿ ಕಾಡಾನೆಗಳ ಸ್ಥಳಾಂತರಕ್ಕೆ ಕ್ರಮ ವಹಿಸಲಾಗುವುದು. ಇಲ್ಲಿನ ಸಮಸ್ಯೆಯನ್ನು ಮೇಲಾಧಿಕಾರಿಗಳ ಗಮನಕ್ಕೆ ತರುತ್ತೇನೆಂದರು. ಆ ಬಳಿಕ ಪ್ರತಿಭಟನೆ ವಾಪಾಸ್ ಪಡೆಯಲಾಯಿತು.

ಮುಖ್ಯ ರಸ್ತೆ ತಡೆದು ಟೈಯರ್‌ಗೆ ಬೆಂಕಿ ಹಚ್ಚಿದ ಪ್ರತಿಭಟನಾಕಾರರು ರಾಜ್ಯ ಸರ್ಕಾರ ಹಾಗೂ ಅರಣ್ಯ ಇಲಾಖೆ ವಿರುದ್ಧ ಧಿಕ್ಕಾರ ಕೂಗಿದರು. ಬೆಳೆಗಾರರ ಸಂಘದ ಉಪಾಧ್ಯಕ್ಷ ವೆಂಕಟೇಶ್, ವಸಂತ್ ಕುಮಾರ್, ರಘು, ಕೋಮರಾಜ್, ಸುನೀಲ್, ದೇವರಾಜ್, ರೋಷನ್, ಅಶ್ವತ್ಥ್, ಮಹೇಶ್, ಸುಮನ್, ಅನಿಲ್, ಮಂಜು ಇತರರು ಹಾಜರಿದ್ದರು.

# ಬಾಂಗ್ಲಾ ನುಸುಳುಕೋರರಿಂದ ಶಾಂತಿ ಭಂಗ: ವಿಎಚ್‌ಪಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಅಕ್ರಮ ವಲಸಿಗರಿಂದ ನಗರದಲ್ಲಿ ಶಾಂತಿ ಸುವ್ಯವಸ್ಥೆ ಹಾಳಾಗುತ್ತಿದೆ. ಪೊಲೀಸರು ತಕ್ಷಣವೇ ಬಾಂಗ್ಲಾ ವಲಸಿಗರ ಪತ್ತೆ ಹಚ್ಚಿ ಗಡಿಪಾರು ಮಾಡಬೇಕು ಎಂದು ವಿಶ್ವ ಹಿಂದು ಪರಿಷತ್ ಆಗ್ರಹಿಸಿದೆ.

ಗುರುವಾರ ಪೊಲೀಸ್ ಉಪಾಧೀಕ್ಷಕ ಮಾಲತೇಶ್ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದ ತಾಲೂಕು ವಿಎಚ್‌ಪಿ ಕಾರ್ಯಕರ್ತರು, ಪಟ್ಟಣದ ವಿವಿಧ ಭಾಗಗಳಲ್ಲಿ ಅಸ್ಸಾಂ ಮೂಲದವರೆಂದು ಮನೆಗಳನ್ನು ಬಾಡಿಗೆಗೆ ಪಡೆದು ನೆಲೆಸಿದ್ದಾರೆ. ಆದರೆ ಅವರು ಬಾಂಗ್ಲಾದೇಶದವರಾಗಿದ್ದಾರೆ. ಇತ್ತೀಚಿನ ದಿನಗಳಲ್ಲಿ ರಾತ್ರಿ ಸಮಯದಲ್ಲಿ ಅವರ ಓಡಾಟ ಹೆಚ್ಚಾಗಿದೆ. ಗುಂಪುಗಾರಿಕೆ, ಹೊಡೆದಾಟ, ಅನಾವಶ್ಯಕ



ಕೂಗಾಟಗಳಿಂದ ನಗರದಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ ಎಂದು ಆರೋಪಿಸಿದರು.

ಇಷ್ಟು ದಿನ ನೆಮ್ಮದಿಯಿಂದ ಬದುಕುತ್ತಿದ್ದ ನಗರವಾಸಿಗಳು ಇವರ ವರ್ತನೆಯಿಂದ ಆತಂಕಕ್ಕೆ ಒಳಗಾಗಿದ್ದಾರೆ. ಅಲ್ಲದೆ, ಇತ್ತೀಚೆಗೆ ಹೆಚ್ಚುತ್ತಿರುವ ಕಳ್ಳತನ ಪ್ರಕರಣಗಳಲ್ಲಿ ವಲಸಿಗರ ಕೈಚಳಕ ಕಂಡುಬರುತ್ತಿರುವುದು ಸಾರ್ವಜನಿಕರ ನಿದ್ದೆಗೆಡಿಸಿದೆ ಎಂದರು.

ಈ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಕಾನೂನಿನ ಚೌಕಟ್ಟಿನೊಳಗೆ ತಕ್ಷಣ ಕ್ರಮ ಕೈಗೊಳ್ಳಬೇಕು.

ನಗರದಲ್ಲಿ ನೆಲೆಸಿರುವವರ ದಾಖಲಾತಿಗಳನ್ನು ಪರಿಶೀಲಿಸಿ, ದಾಖಲೆಗಳಿಲ್ಲದವರನ್ನು ಹಾಗೂ ದಾಖಲೆಗಳಿದ್ದರೂ ಶಾಂತಿ ಸುವ್ಯವಸ್ಥೆಗೆ ಧಕ್ಕೆಯುಂಟುಮಾಡುವವರನ್ನು ನಗರದಿಂದ ಹೊರಗಿಡಬೇಕು ಎಂದು ಅವರು ಒತ್ತಾಯಿಸಿದರು.

ವಿಶ್ವ ಹಿಂದು ಪರಿಷತ್ ಅಧ್ಯಕ್ಷ ಬಿರಡಹಳ್ಳಿ ಬಾಲಕೃಷ್ಣ, ಜಿಲ್ಲಾ ಸಹಕಾರ್ಯದರ್ಶಿ ಹರೀಶ ಕರಡಿಗಾಲ, ಜಿಲ್ಲಾ ಉಪಾಧ್ಯಕ್ಷ ವಿಜಯಕುಮಾರ್, ತಾಲ್ಲೂಕು ಕಾರ್ಯದರ್ಶಿ ರವಿ ಹರ್ಲೆ, ಸುರೇಶ್, ನಗರ ಅಧ್ಯಕ್ಷ ಮಹೇಂದ್ರ ಕುಮಾರ್, ನಗರ ಸಂಯೋಜಕ ಸುಜನ್, ಆಟೋ ರವಿ ಇತರರಿದ್ದರು.

# ನಿತ್ಯ ಜೀವನದಲ್ಲಿ ಯೋಗ ಅಳವಡಿಸಿಕೊಳ್ಳಿ: ಸಿಮೆಂಟ್ ಮಂಜು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಯುವಕರು ದುಶ್ಚಟಗಳಿಂದ ದೂರ ಇರಬೇಕು. ಉತ್ತಮ ಆರೋಗ್ಯಕ್ಕಾಗಿ ಕ್ರೀಡೆ, ವ್ಯಾಯಾಮ, ಪ್ರಾಣಾಯಾಮ ಹಾಗೂ ದೈಹಿಕ ಕಸರತ್ತುಗಳನ್ನು ನಿತ್ಯ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಕುನಿಗನಹಳ್ಳಿ ಗ್ರಾಮದಲ್ಲಿ ಆಯೋಜಿಸಿದ್ದ ಮೋದಿ ಕ್ರಿಕೆಟ್ ಕಪ್ ಅನ್ನು ಉದ್ಘಾಟಿಸಿ ಮಾತನಾಡಿ, ಇಂದಿನ ಪರಿಸ್ಥಿತಿಯಲ್ಲಿ ಕೆಲ ಯುವಕರು ಮಾದಕ ವಸ್ತುಗಳು, ಮದ್ಯಪಾನ ಹಾಗೂ ಧೂಮಪಾನದಂತಹ ಚಟಗಳಿಗೆ ಬಲಿಯಾಗುತ್ತಿರುವುದು ಆತಂಕಕಾರಿ ವಿಷಯವಾಗಿದೆ. ಹೆತ್ತವರು ತಮ್ಮ ಮಕ್ಕಳ ಮೇಲೆ ಅನೇಕ ಕನಸುಗಳನ್ನು



ಇಟ್ಟುಕೊಂಡಿರುತ್ತಾರೆ. ಪೋಷಕರ ಕನಸುಗಳಿಗೆ ಧಕ್ಕೆ ಉಂಟಾಗದಂತೆ ಯುವಕರು ಎಚ್ಚರಿಕೆಯಿಂದ ನಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರ ಪ್ರಾಮಾಣಿಕತೆ, ಕಾರ್ಯಕ್ಷಮತೆ ಹಾಗೂ ಬದ್ಧತೆಯುಳ್ಳ ಆಡಳಿತದ ಮೂಲಕ ಭಾರತವನ್ನು ಜಗತ್ತಿನ ಪ್ರಮುಖ ಆರ್ಥಿಕ ಶಕ್ತಿಯಾಗಿ ರೂಪಿಸುತ್ತಿದೆ. ಪಾಶ್ಚಿಮಾತ್ಯ ದೇಶಗಳೇ ಭಾರತದ ಆರ್ಥಿಕ ಬೆಳವಣಿಗೆಯನ್ನು ಪ್ರಶಂಸಿಸುತ್ತಿವೆ ಎಂದು ಹೇಳಿದರು.

ವಿಕಸಿತ ಭಾರತ ಪರಿಕಲ್ಪನೆಯೊಂದಿಗೆ 2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವ ಗುರಿಯನ್ನು ಸರ್ಕಾರ ಹೊಂದಿದೆ. ಬಡವರು, ಮಹಿಳೆಯರು, ಯುವಕರು ಹಾಗೂ ರೈತರು ಹಿಂದುಳಿಯದಂತೆ ನೋಡಿಕೊಳ್ಳುವ ಪ್ರಧಾನಿಯ ದೃಷ್ಟಿಕೋನದಿಂದ ವಿಶ್ವಗುರು ಭಾರತದ ಕನಸು ಸಾಕಾರಗೊಳ್ಳಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ಬಿಜೆಪಿ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ನೇತ್ರಾವತಿ ಮಂಜುನಾಥ್, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ, ಗ್ರಾಮ ಪಂಚಾಯಿತಿ ಸದಸ್ಯ ಪ್ರಕಾಶ್, ಮುಖಂಡರಾದ ಪ್ರದೀಪ್ ನಿಡನೂರು, ಪ್ರಭು, ಪೂವಯ್ಯ, ಅಕ್ಷತಾ ಕೋಡಗಲವಾಡಿ, ಉಮಾನಾಥ್ ಸುವರ್ಣ, ರೇಣು ಇತರರು ಉಪಸ್ಥಿತರಿದ್ದರು.

# ‘ನೀ ಇಲ್ಲದ ಜಗತ್ತು ಹೇಗಿರುತ್ತಿತ್ತು’ ಕಥಾ ಸಂಕಲನ ಬಿಡುಗಡೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಪ್ರಸ್ತುತ ಸಮಾಜ ಎದುರಿಸುತ್ತಿರುವ ನೋವು, ನಿರ್ಲಕ್ಷ್ಯ ಮತ್ತು ಜವಾಬ್ದಾರಿಗಳನ್ನು ಪ್ರಶ್ನಿಸುವ ನೀ ಇಲ್ಲದ ಜಗತ್ತು ಹೇಗಿರುತ್ತಿತ್ತು ಕಥಾ ಸಂಕಲನ ಎಲ್ಲರೂ ಓದಬೇಕಾದ ಅತ್ಯಮೂಲ್ಯ ಕೃತಿ ಎಂದು ಸಾಹಿತಿ ಪ್ರಸಾದ್ ರಕ್ಷಿದಿ ಹೇಳಿದರು.

ಪಟ್ಟಣದ ಲಯನ್ಸ್ ಮಂದಿರದಲ್ಲಿ ಕನ್ನಡ ಸಾಹಿತ್ಯ ಪರಿಷತ್, ಕಾರ್ಯನಿರತ ಪತ್ರಕರ್ತರ ಸಂಘ, ಡ್ರಗ್ಸ್ ಮುಕ್ತ ಸಕಲೇಶಪುರ ಆಂದೋಲನ ಹಾಗೂ ವಿವಿಧ ಸಂಘ-ಸಂಸ್ಥೆಗಳ ವತಿಯಿಂದ ಪತ್ರಕರ್ತ ಮಲ್ನಾಡ್ ಮೆಹಬೂಬ್ ಅವರ ಲೇಖನಗಳ ಸಂಕಲನ ನೀ ಇಲ್ಲದ ಜಗತ್ತು ಹೇಗಿರುತ್ತಿತ್ತು ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದರು.

ಸಮಾಜದ ಅಂತಃ ಸ್ಪಂದನಕ್ಕೆ ಪ್ರಶ್ನೆ ಎಸೆದ ಕೃತಿ ಓದುಗರನ್ನು ಚಿಂತೆಗೆ ದೂಡುತ್ತದೆ. ಮಲ್ನಾಡ್ ಮೆಹಬೂಬ್ ಅವರ ನಾಲ್ಕು ಕೃತಿಗಳಲ್ಲಿ ಅತ್ಯುತ್ತಮವಾದ ಪುಸ್ತಕ ಇದಾಗಿದೆ. ಈ ಕೃತಿ ಕೇವಲ ಲೇಖನಗಳ ಸಂಕಲನವಾಗದೆ ಇಂದಿನ ಸಮಾಜದ ನೋವು, ನಿರ್ಲಕ್ಷ್ಯ ಮತ್ತು




ಜವಾಬ್ದಾರಿಗಳ ಬಗ್ಗೆ ಪ್ರಶ್ನೆ ಎತ್ತುವ ಕನ್ನಡಿ. ನೀ ಇಲ್ಲದ ಜಗತ್ತು ಎಂಬ ಪ್ರಶ್ನೆ ಪ್ರತಿಯೊಬ್ಬರೂ ತಮ್ಮೊಳಗೆ ಕೇಳಿಕೊಳ್ಳಬೇಕಾದ ಪ್ರಶ್ನೆಯೆಂದು ಅಭಿಪ್ರಾಯಪಟ್ಟರು.

ತಾಲ್ಲೂಕಿನಲ್ಲಿ ಸಾಹಿತ್ಯ ಕೃಷಿ ಕಡಿಮೆಯಾಗುತ್ತಿದೆ. ಇಂತಹ ಸಂದರ್ಭದಲ್ಲಿ ಪುಸ್ತಕ ಬಿಡುಗಡೆ ಮಾಡುತ್ತಿರುವುದು ಸಂತೋಷದ ವಿಷಯ. ನಾನು ಹೀಗಿದ್ದರೆ ಹೇಗಿರುತಿತ್ತು ಎಂಬ ಕಲ್ಪನಾ ಲೋಕದ ಸಿದ್ಧಾಂತದ ಪ್ರಪಂಚಕ್ಕೆ ಮಲ್ನಾಡ್ ಮೆಹಬೂಬ್ ಅವರ ನೀನಿಲ್ಲ ಜಗತ್ತು ಹೇಗಿರುತಿತ್ತು ಪಸ್ತಕ ಸೇರ್ಪಡೆಯಾಗಿದೆಯೆಂದರು.

ಅಧ್ಯಕ್ಷತೆ ವಹಿಸಿದ್ದ ಮಾಜಿ ಶಾಸಕ ಹೆಚ್.ಎಂ.ವಿಶ್ವನಾಥ್ ಮಾತನಾಡಿ, ಇಂದು ಸಮಾಜವನ್ನು ಪ್ರಶ್ನಿಸುವ, ಚಿಂತನೆಗೆ ಒತ್ತುವ ಸಾಹಿತ್ಯ ಅತ್ಯಂತ ಅಗತ್ಯ. ಮಲ್ನಾಡ್ ಮೆಹಬೂಬ್ ಅವರ ಬರಹಗಳು ಸಮಾಜವನ್ನು ಎಚ್ಚರಿಸುವ ಶಕ್ತಿಯನ್ನು ಹೊಂದಿವೆ ಎಂದರು.

ಮೆಹಬೂಬ್ ಅವರು ಹೋರಾಟಕ್ಕೆ ಜೀವಂತಿಕೆ ಕೊಟ್ಟವರು. ಅವರ ತಂದೆ ರೆಹಮತುಲ್ಲ ಒಳ್ಳೆಯ ನಾಯಕರಾಗಿದ್ದರು. ಅವರಲ್ಲಿನ ಹಲವು ಗುಣಗಳು ರಕ್ತಗತವಾಗಿ ಬಳುವಳಿಯಾಗಿ ಬಂದಿದೆ. ಪುಸ್ತಕವನ್ನು ಹಣ ಕೊಟ್ಟು ಓದಿದರೆ ಮಾತ್ರ ಲೇಖಕರಿಗೆ ಖುಷಿಯಾಗುತ್ತದೆ. ನಾವು ಅವರಿಗೆ ಸಲ್ಲಿಸುವ ಗೌರವ ಕೂಡ ಆಗಿದೆ ಎಂದು ಹೇಳಿದರು.

ಆನೆಮಹಲ್ ಜುಮ್ಮಾ ಮಸೀದಿಯ ಅಧ್ಯಕ್ಷ ಇಬ್ರಾಹಿಂ ಕೆ. ಮುಸ್ಲಿಯಾರ್ ಮಾತನಾಡಿ, ಸಾಹಿತ್ಯ ಮಾನವೀಯತೆಯನ್ನು ಕಟ್ಟುವ ಸೇತುವೆ. ಧರ್ಮ, ಜಾತಿ, ಭಾಷೆ ಮೀರಿದ ಮಾನವ ಬಂಧುತ್ವವನ್ನು ಈ ರೀತಿಯ ಬರಹಗಳು ಗಟ್ಟಿ ಮಾಡುತ್ತವೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ ಮಾಜಿ ತಾಲ್ಲೂಕಾಧ್ಯಕ್ಷ ಜೈ ಮಾರುತಿ ದೇವರಾಜ್ ಮಾತನಾಡಿ, ಸಮಾಜದ ಅಸಮಾಧಾನ, ಪ್ರಶ್ನೆ ಮತ್ತು ಆಶಯಗಳನ್ನು ದಾಖಲಿಸುವುದು ಬರಹಗಾರರ ಕರ್ತವ್ಯ. ಈ ಕೃತಿ ಅದನ್ನು ಸಮರ್ಥವಾಗಿ ನಿರ್ವಹಿಸಿದೆ ಎಂದರು.

ಪತ್ರಕರ್ತ ನಾಗರಾಜ್ ಹೆತ್ತೂರು ಮಾತನಾಡಿ, ಪತ್ರಿಕೋದ್ಯಮ ಮತ್ತು ಸಾಹಿತ್ಯ ಎರಡನ್ನೂ ಸಮಾನವಾಗಿ ಹೊತ್ತೊಯ್ಯುವ ಅಪರೂಪದ ಬರಹಗಾರರಲ್ಲಿ ಮಲ್ನಾಡ್ ಮೆಹಬೂಬ್ ಒಬ್ಬರು ಎಂದರು.

ಲೇಖಕ ಮಲ್ನಾಡ್ ಮೆಹಬೂಬ್ ಮಾತನಾಡಿ, ಈ ಕೃತಿ ನನ್ನೊಬ್ಬನದ್ದಲ್ಲ. ನಾನು ಕಂಡ ಸಮಾಜ, ಕೇಳಿದ ಧ್ವನಿಗಳು, ಓದುಗರಲ್ಲಿ ಒಂದು ಪ್ರಶ್ನೆ ಹುಟ್ಟಿದರೆ ಅದೇ ಈ ಪುಸ್ತಕದ ಸಾಧನೆ ಎಂದರು. ಸಕಲೇಶಪುರ ಯೋಜನಾ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸಯ್ಯದ್ ಮುಫೀಜ್, ತೌಫಿಕ್ ಅಹಮದ್, ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷೆ ಶಾರದ ಗುರುಮೂರ್ತಿ, ಕಾರ್ಯನಿರತ ಪತ್ರಕರ್ತರ ಸಂಘದ ತಾಲ್ಲೂಕು ಅಧ್ಯಕ್ಷ ಜೈ ಭೀಮ್ ಮಂಜು, ಲೇಖಕ ಯಡೇಹಳ್ಳಿ ಆರ್. ಮಂಜುನಾಥ್, ಡಾ. ಫಾದರ್ ಫ್ರಾನ್ಸಿಸ್ ಚಿರಯ್ಕಲ್ ಹಾಗೂ ಇತರರಿದ್ದರು.

# ಸ್ಕಾಲರ್ಸ್ ಶಾಲೆಯಲ್ಲಿ ರಸ್ತೆ ಸುರಕ್ಷತಾ ಅಭಿಯಾನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರದ ಸ್ಕಾಲರ್ಸ್ ಇಂಟರ್‌ನ್ಯಾಷನಲ್ ಶಾಲೆಯಲ್ಲಿ ಪ್ರಾದೇಶಿಕ ಸಾರಿಗೆ ಇಲಾಖೆ ವತಿಯಿಂದ ಗುರುವಾರ 37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಅಭಿಯಾನ ಅಂಗವಾಗಿ ರಸ್ತೆ ಸುರಕ್ಷತಾ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಪ್ರಾದೇಶಿಕ ಸಾರಿಗೆ ಅಧಿಕಾರಿ



ಜಿ.ಪಿ.ಪ್ರಕಾಶ್ ಮಾತನಾಡಿ, ರಸ್ತೆ ಸುರಕ್ಷತೆ-ಜೀವದ ರಕ್ಷಣೆ ಎಂಬ ಧ್ಯೇಯ ವಾಕ್ಯದೊಂದಿಗೆ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ. ಬೈಕ್‌ನಲ್ಲಿ ಸಂಚರಿಸುವವರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಸೀಟ್ ಬೆಲ್ಟ್ ಧರಿಸಿದರೆ ಅಪಘಾತ ಸಂಭವಿಸಿದರೆ ಪ್ರಾಣಾಪಾಯದಿಂದ ಪಾರಾಗಬಹುದು. ಮಕ್ಕಳು ರಸ್ತೆ ಸುರಕ್ಷತಾ ನಿಯಮ ಪಾಲಿಸಬೇಕು. ಪೋಷಕರಿಗೂ ತಿಳಿವಳಿಕೆ ನೀಡಬೇಕು ಎಂದರು. ವಿದ್ಯಾರ್ಥಿಗಳಿಗೆ ಹೆಲ್ಮೆಟ್ ಧರಿಸುವುದು ಹಾಗೂ ಸಂಚಾರ ನಿಯಮ ಪಾಲಿಸುವ ವಿಧಾನಗಳನ್ನು ಪ್ರಾಯೋಗಿಕವಾಗಿ ತಿಳಿಸಲಾಯಿತು. ಸಂಚಾರ ಪೊಲೀಸ್ ನಿರೀಕ್ಷಕ ದಯಾನಂದ್, ಹಿರಿಯ ನಿರೀಕ್ಷಕ ಪಿ.ಆರ್.ಯಶವಂತ್ ಕುಮಾರ್, ಅಧೀಕ್ಷಕ ಶರತ್ ಚಂದ್ರ, ಶಾಲೆಯ ಆಡಳಿತಾಧಿಕಾರಿ ಡಾ. ಹೆಚ್.ಎನ್. ಚಂದ್ರಶೇಖರ್, ಕಾರ್ಯದರ್ಶಿ ಮಮತಾ ಚಂದ್ರಶೇಖರ್ ಮತ್ತಿತರರಿದ್ದರು.

# ರೈತರ ಆರ್ಥಿಕ ಚೇತರಿಕೆಗೆ ಹೈನುಗಾರಿಕೆ ಸಹಕಾರಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಗ್ರಾಮೀಣ ಪ್ರದೇಶದಲ್ಲಿ ರೈತರು ಸ್ವಾವಲಂಬಿಗಳಾಗಲು ಹೈನುಗಾರಿಕೆ ಬಹುಮುಖ್ಯ ಪಾತ್ರ ವಹಿಸಿದ್ದು, ಈ ಕ್ಷೇತ್ರಕ್ಕೆ ಆದ್ಯತೆ ನೀಡುವುದು ನಮ್ಮ ಕರ್ತವ್ಯ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ತಾಲೂಕಿನ ಹಡೇನಹಳ್ಳಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ನೂತನ ನಿರ್ದೇಶಕರ ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾಡಿ, ಹಾಸನ ಹಾಲು ಒಕ್ಕೂಟದ ನಿರ್ದೇಶಕರಾಗುವ ಮೊದಲು ತಾಲೂಕಿನಲ್ಲಿ ಕೇವಲ 35 ಸಂಘಗಳಿದ್ದವು. ಇಂದು 342 ಸಂಘಗಳು ಸ್ಥಾಪನೆಯಾಗಿವೆ ಎಂದರು.

307 ಹೊಸ ಡೇರಿಗಳನ್ನು ನಿರ್ಮಾಣ ಮಾಡಲಾಗಿದೆ. ಈ ಹೈನುಗಾರಿಕೆಯ ಉತ್ತೇಜನದಿಂದ ರೈತರ ಆರ್ಥಿಕ ಬದುಕು ಸುಧಾರಿಸಿದ್ದು, ಗ್ರಾಮೀಣ ಭಾಗದಲ್ಲಿ ಮಹಿಳೆಯರು ಮನೆಗಳಲ್ಲಿ ಹಸುಗಳನ್ನು ಸಾಕಿ ಸ್ವಯಂ ಉದ್ಯೋಗದಿಂದ ಸ್ವಾವಲಂಬಿಗಳಾಗಿ ಬದುಕು ಸಾಗಿಸಲು ಸಹಕಾರಿಯಾಗಿದೆ ಎಂದು ತಿಳಿಸಿದರು.

ನಾನು ತಾಲೂಕು ಪಂಚಾಯಿತಿ ಅಧ್ಯಕ್ಷನಾಗಿದ್ದ ಅವಧಿಯಿಂದಲೂ ಶಿಕ್ಷಣ, ಆರೋಗ್ಯ, ಕೃಷಿ, ಹೈನುಗಾರಿಕೆ, ಸಹಕಾರಿ ಕ್ಷೇತ್ರ, ಕ್ರೀಡೆ ಹಾಗೂ ಸಾಹಿತ್ಯ ಕ್ಷೇತ್ರ ಸೇರಿದಂತೆ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗೆ ಶ್ರಮ ವಹಿಸಿದ್ದೇವೆ. ಆಯಾ ಕಾಲಘಟ್ಟದಲ್ಲಿ ಯಾವುದೇ ಸರ್ಕಾರಗಳು ಇದ್ದರೂ ಸಹ ಶಾಸನ ಬದ್ಧವಾಗಿ ಕೊಟ್ಟ



ಅಧಿಕಾರವನ್ನು ಸದ್ಬಳಕೆ ಮಾಡಿಕೊಂಡು ಕ್ಷೇತ್ರದ ಜನತೆಯ ಪರವಾಗಿ ಸೇವೆ ಸಲ್ಲಿಸುತ್ತಿದ್ದೇನೆ. ಡೇರಿ ಕಟ್ಟಡ ನಿರ್ಮಾಣಕ್ಕೆ ಸಹಾಯಧನ, ಮಹಾತ್ಮ ಗಾಂಧಿ ನರೇಗಾ ಯೋಜನೆ ಅಡಿಯಲ್ಲಿ ಗ್ರಾಮಗಳ ಅಭಿವೃದ್ಧಿಗೆ ಸಹಕಾರ ನೀಡಲಾಗಿದೆ ಎಂದರು. ಜಿಲ್ಲೆಯಲ್ಲಿ ಡೇರಿ ವ್ಯವಸ್ಥೆ ಅತ್ಯುತ್ತಮವಾಗಿ ಅಭಿವೃದ್ಧಿ ಹೊಂದಲು ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಹಾಗೂ ಮಾಜಿ ಸಚಿವ ರೇವಣ್ಣನವರ ಶ್ರಮವಿದೆ. ಕೊಳವೆ ಬಾವಿಗಳು ನೀರಿಲ್ಲದೆ ಒಣಗಿದ ಸಂದರ್ಭದಲ್ಲಿ ರೈತ ಮಹಿಳೆಯರ ಮಾಂಗಲ್ಯ ಸರವನ್ನು ಮಾರಾಟ ಮಾಡಿ ಕೊಳವೆ ಬಾವಿ ಕೊರೆಸುವ ಪರಿಸ್ಥಿತಿ ಇತ್ತು. ಈ ಭಾಗದಲ್ಲಿ ಹೇಮಾವತಿ ನಾಲೆಯಿಂದ ಏತನೀರಾವರಿ ಮೂಲಕ ಕೆರೆಗಳನ್ನು ತುಂಬಿಸಿದ ಪರಿಣಾಮವಾಗಿ ಕೊಳವೆಬಾವಿಗಳು ಪುನಶ್ಚೇತನಗೊಂಡಿದ್ದು, ಶೇ. 95 ರಷ್ಟು ನೀರಾವರಿ ಆಗಿದೆ. ಸ್ಪೇಸ್ ವರದಿಯ ಪ್ರಕಾರ ನಮ್ಮ ತಾಲೂಕು ಬ್ಲಾಕ್ ಏರಿಯದಿಂದ ಹೊರತೆಗೆಯಲು ಶ್ರಮ ವಹಿಸಿದ್ದೇವೆ ಎಂದು ತಿಳಿಸಿದರು.

ಅದರಿಂದ ತೆಂಗಿನ ಪಸಲು ಉತ್ತಮ ಇಳುವರಿಯಾಗಿದ್ದು, ರೈತರು ಮೆಕ್ಕೆ ಜೋಳ ಬೆಳೆಯುತ್ತಿರುವುದರಿಂದ ಎಕರೆಗೆ 50 ರಿಂದ 60 ಸಾವಿರ ಅಧ್ಯಾಯ ಪಡೆಯುವಂತಾಗಿದೆ. ಅಲ್ಲದೆ ಹೈನುಗಾರಿಕೆಗೆ ಉತ್ತೇಜನವಾಗಿದೆ. 2,76,000 ಲೀಟರ್ ಹಾಲಿನ ಉತ್ಪಾದನೆಯಾಗುತ್ತಿದ್ದು,

400 ಕೋಟಿ ವಹಿವಾಟು ಆಗುತ್ತಿದೆ. ಹಾಲಿನ ಉತ್ಪಾದನೆಯಲ್ಲಿ ನಮ್ಮ ತಾಲೂಕು ರಾಜ್ಯದಲ್ಲಿ ನಾಲ್ಕನೇ ಸ್ಥಾನದಲ್ಲಿದ್ದು, ರೈತರ ಆರ್ಥಿಕ ಸ್ಥಿತಿ ದ್ವಿಗುಣವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಎಪಿಎಂಸಿ ಮಾಜಿ ಅಧ್ಯಕ್ಷ ಮಾಜಿ ಅಧ್ಯಕ್ಷ ರಮೇಶ್ ಕುಂಬಾರಳ್ಳಿ ಮಾತನಾಡಿದರು. ಎಪಿಎಂಸಿ ಅಧ್ಯಕ್ಷ ವೆಂಕಟೇಶ್, ವಳಗೆರಳ್ಳಿ ಮಂಜಣ್ಣ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷೆ ಲತಾ ತಮ್ಮಯ್ಯ, ಜಯರಾಮ್, ಮುಖಂಡರಾದ ಪ್ರವೀಣ್ ಚಿಕ್ಕಬಿಳ್ತಿ, ಸಿಂಹಾದ್ರಿ, ಮಂಜಣ್ಣ, ಕಾಳೇಗೌಡ, ರವಿ, ದೊರೆಸ್ವಾಮಿ, ಎಚ್.ಎನ್. ಮಂಜೇಗೌಡ, ಗೋವಿಂದೇಗೌಡ ಮುಂತಾದವರಿದ್ದರು.

ಕನ್ನಡ ಪೋಸ್ಟ್
E-mail : kannadapostnews@gmail.com facebook.com / ಕನ್ನಡ post



# ಮೌಢ್ಯತೆ ಹೋಗಲಾಡಿಸಲು ವಿಜ್ಞಾನಬದ್ಧ ಚಿಂತನೆ ಹೆಚ್ಚಲಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಸಮಾಜದಲ್ಲಿ ಮೌಢ್ಯತೆ, ಕಂದಾಚಾರ, ಅಂಧ ನಂಬಿಕೆಗಳು ಹೆಚ್ಚುತ್ತಿರುವ ಹೊತ್ತಿನಲ್ಲಿ ವಿಜ್ಞಾನ ಬದ್ಧವಾದ ಚಿಂತನೆ ಹಾಗೂ ವೈಜ್ಞಾನಿಕ ಅರಿವು ಹೆಚ್ಚಬೇಕು ಎಂದು ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಜೆ.ಆರ್.ಕೆಂಚೇಗೌಡ ತಿಳಿಸಿದರು.

ನಗರದ ಖಾಸಗಿ ಹೋಟೆಲ್‌ನಲ್ಲಿ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್‌ನ 5ನೇ ವೈಜ್ಞಾನಿಕ ಸಮ್ಮೇಳನದಲ್ಲಿ ರಾಜ್ಯ ಮಟ್ಟದ ಪ್ರಶಸ್ತಿಗೆ ಭಾಜನರಾದ ಜಿಲ್ಲೆಯ ಮೂವರು ಸಾಧಕರನ್ನು ಸನ್ಮಾನಿಸುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸಮಾಜದಲ್ಲಿ ಮೂಢನಂಬಿಕೆಗಳು ಹೆಚ್ಚಾಗುತ್ತಿರುವುದು ಆತಂಕಕಾರಿ ಬೆಳವಣಿಗೆ. ಈ ಹಿನ್ನೆಲೆ ಯುವಕ-ಯುವತಿಯರಲ್ಲಿ ವೈಜ್ಞಾನಿಕ ಅರಿವು ಹೆಚ್ಚಿಸುವ ಜಾಗೃತಿ ಕಾರ್ಯಕ್ರಮಗಳು ಹೆಚ್ಚು ನಡೆಯಬೇಕಾಗಿದೆ. ರಾಜ್ಯಾದ್ಯಂತ ವೈಜ್ಞಾನಿಕ ಸಂಶೋಧನಾ ಪರಿಷತ್ ಉತ್ತಮ ಕಾರ್ಯ ನಿರ್ವಹಿಸುತ್ತಿದೆ. ಜಿಲ್ಲೆಯಲ್ಲಿಯೂ ವಿಜ್ಞಾನ ಪ್ರಚಾರ ಹಾಗೂ ಸಂಶೋಧನಾ ಚಟುವಟಿಕೆಗಳಿಗೆ ಹೆಚ್ಚಿನ ಒತ್ತು ನೀಡಬೇಕಿದೆ ಎಂದು ಹೇಳಿದರು.

ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ ಮಾತನಾಡಿ, ಕರ್ನಾಟಕ, ಆಂಧ್ರಪ್ರದೇಶ ಮತ್ತು ತಮಿಳುನಾಡು ದೇಶದಲ್ಲೇ ಹೆಚ್ಚು ಮೌಢ್ಯತೆಗೆ ಒಳಗಾಗಿರುವ ರಾಜ್ಯಗಳಾಗಿದ್ದರೂ, ವಿಜ್ಞಾನ, ತಂತ್ರಜ್ಞಾನ ಹಾಗೂ ಬಾಹ್ಯಾಕಾಶ ಕ್ಷೇತ್ರದಲ್ಲಿ ಸಾಕಷ್ಟು ಸಾಧನೆಗಳಾಗುತ್ತಿರುವ ನಡುವೆಯೂ ಜನರಲ್ಲಿ ಅಂಧ ನಂಬಿಕೆಗಳು ಬೇರೂರಿರುವುದು ನಿಜಕ್ಕೂ ಚಿಂತೆಗೀಡು ಮಾಡುತ್ತಿದೆ ಎಂದು ಹೇಳಿದರು.

ಗ್ರಾಮೀಣ ವಿದ್ಯಾರ್ಥಿಗಳಿಗಾಗಿ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ ವಿಜ್ಞಾನಕ್ಕೆ ಹೆಚ್ಚಿನ ಒತ್ತು ನೀಡಿದ ಮಹಾನ್ ಚಿಂತಕರ ಹೆಸರಿನ ಪ್ರಶಸ್ತಿ ಜಿಲ್ಲೆಯ ಹಿರಿಯ ವಕೀಲ ಕೆ.ವಿ.ಯೋಗೀಶ್ ಅವರಿಗೆ ದೊರೆತಿರುವುದು ಜಿಲ್ಲೆಯ ಗೌರವವಾಗಿದೆ. ಮಹಿಳೆಯರು ಕುಟುಂಬ ನಿರ್ವಹಣೆಯ ಜೊತೆಗೆ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕೆಂಬುದಕ್ಕೆ ಹಿಮ್ಸ್ ಕಾಲೇಜಿನ ಎನ್‌ಎಸ್‌ಎಸ್ ಅಧಿಕಾರಿ ನಿಶ್ಚಿತಾ ಕುಮಾರಿ ಅವರಿಗೆ ದೊರೆತಿರುವ ಚೈತನ್ಯ ಶ್ರೀ ಪುರಸ್ಕಾರ ಉತ್ತಮ ಉದಾಹರಣೆಯಾಗಿದೆ. ಅಲ್ಲದೆ, ಸಮಾಜಸೇವೆಯಲ್ಲಿ ನಿರಂತರವಾಗಿ ತೊಡಗಿಸಿಕೊಂಡು ವಿಶ್ವದಾಖಲೆ ಪುರಸ್ಕಾರಕ್ಕೆ ಪಾತ್ರರಾದ ವಿ.ಎಸ್. ರಾಣಿ ಅವರನ್ನು ಗೌರವಿಸಿರುವುದು ಸಂತಸ ತಂದಿದೆ ಎಂದು ಹೇಳಿದರು.

ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ಗೌರವಾಧ್ಯಕ್ಷ ಎಂ.ಕೆ. ಕಮಲ್ ಕುಮಾರ್ ಮಾತನಾಡಿ, ಹುಲಿಕಲ್ ನಟರಾಜು ಅವರು ವಿಜ್ಞಾನಿಗಳು ಮತ್ತು ಯುವಜನತೆಯನ್ನು ವಿಜ್ಞಾನದತ್ತ ಕರೆದೊಯ್ಯುವ ಮಹತ್ತರ ಕಾರ್ಯವನ್ನು ರಾಜ್ಯದ ಹಲವು ಜಿಲ್ಲೆಗಳಲ್ಲಿ ನಡೆಸಿಕೊಂಡು ಬರುತ್ತಿದ್ದಾರೆ. ಇತ್ತೀಚೆಗೆ ಯಾದಗಿರಿಯಲ್ಲಿ ನಡೆದ ಸಮ್ಮೇಳನದಲ್ಲಿ ಜಿಲ್ಲೆಯ ಮೂವರನ್ನು ಸನ್ಮಾನಿಸಿರುವುದರ ಜೊತೆಗೆ ದೊಡ್ಡಬಳ್ಳಾಪುರದಲ್ಲಿ ನಡೆದ ಆನಾನು ವಿಜ್ಞಾನಿಟ ಟೆಲಿಸ್ಕೋಪ್ ತಯಾರಿಕಾ ಕಾರ್ಯಕ್ರಮದಲ್ಲಿ ವಿಶ್ವದಾಖಲೆ ನಿರ್ಮಾಣವಾಗಿದೆ ಎಂದು ಮಾಹಿತಿ ನೀಡಿದರು.

ವೈಜ್ಞಾನಿಕ ಸಂಶೋಧನಾ ಪರಿಷತ್ ಜಿಲ್ಲಾಧ್ಯಕ್ಷ ರವಿನಾಕಲಗೂಡು ಮಾತನಾಡಿ, ವೈಜ್ಞಾನಿಕ ಪರಿಷತ್ ಮೂಲಕ ಮೌಢ್ಯತೆ, ಕಂದಾಚಾರ ಹಾಗು ಸಾಮಾಜಿಕ ಪಿಡುಗುಗಳ ನಿವಾರಣೆಗೆ ರಾಜ್ಯಾದ್ಯಂತ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಅದರ ಭಾಗವಾಗಿ ಯಾದಗಿರಿಯಲ್ಲಿ ಯಶಸ್ವಿಯಾಗಿ ನಡೆದ ಐದನೇ ವೈಜ್ಞಾನಿಕ ಸಮ್ಮೇಳನ ಸಾಕ್ಷಿಯಾಗಿದೆ ಎಂದರು. ಮುಂದಿನ ದಿನಗಳಲ್ಲಿ ನಮ್ಮ ಜಿಲ್ಲೆಯಲ್ಲಿ ರಾಷ್ಟ್ರಮಟ್ಟದ ಕಾರ್ಯಕ್ರಮವನ್ನು ಆಯೋಜಿಸಲಾಗುವುದು. ರಾಷ್ಟ್ರಪತಿಯವರನ್ನು ಆಹ್ವಾನಿಸಲಾಗಿದ್ದು, ಇನ್ನೂ ಹೆಚ್ಚಿನ ಜನಪರ ಹಾಗು ವಿಜ್ಞಾನಪರ ಕಾರ್ಯಕ್ರಮಗಳನ್ನು ನಡೆಸಲಾಗುವುದು ಎಂದು ಭರವಸೆ ನೀಡಿದರು.

ರಾಜ್ಯಮಟ್ಟದ ಪ್ರಶಸ್ತಿಗೆ ಭಾಜನರಾದ ವಕೀಲ ಕೆ.ವಿ.ಯೋಗೀಶ್, ಎನ್‌ಎಸ್‌ಎಸ್ ಅಧಿಕಾರಿ ನಿಚಿತಾ ಕುಮಾರಿ ಹಾಗೂ ಸೇವಾದಳದ ವಲಯ ಸಂಘಟಕಿ ವಿ.ಎಸ್.ರಾಣಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ವಕೀಲರ ಸಂಘದ ಅಧ್ಯಕ್ಷ ಮೋಗಣ್ಣಗೌಡ, ಮಾಜಿ ಅಧ್ಯಕ್ಷ ಜೆ.ಪಿ.ಶೇಖರ್, ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಪ್ರಧಾನ ಕಾರ್ಯದರ್ಶಿ ಜಿ.ಕುಮಾರ್, ಮೈಸೂರು ಪ್ರತಿನಿಧಿ ಹರೀಶ್, ಕನ್ನಡ ಸಾಹಿತ್ಯ ಪರಿಷತ್ತಿ ಮಾಜಿ ಅಧ್ಯಕ್ಷ ನಾಯಕರಳ್ಳಿ ಮಂಜೇಗೌಡ, ಕಾಂಗ್ರೆಸ್ ಮುಖಂಡ ಮರ್ಕುಲಿ ಗೋಪಾಲ್, ದಿಬ್ಬೂರು ರಮೇಶ್, ಕತ್ತಿ ಮಲ್ಲೇನಹಳ್ಳಿ ಪರಮೇಶ್, ಸೋಮ ನಾಯಕ್, ಹರೀಶ್ ಹಲ್ಲಹಳ್ಳಿ ಮತ್ತಿತರರು ಹಾಜರಿದ್ದರು.

# ಕೈಗಾರಿಕಾ ವಲಯಕ್ಕೆ ಯುಜಿ ಕೇಬಲ್ ಅಳವಡಿಕೆಗೆ ಪೂಜೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಚನ್ನರಾಯಪಟ್ಟಣ: ತಾಲ್ಲೂಕಿನಲ್ಲಿ ಗುಣಮಟ್ಟದ ವಿದ್ಯುತ್ ಪೂರೈಕೆ ಸಲುವಾಗಿ ಆಕ್ರಮ-ಸಕ್ರಮ ಯೋಜನೆಯಡಿ ಏಳೂವರೆ ಸಾವಿರ ಪರಿವರ್ತಕಗಳನ್ನು ಅಳವಡಿಸಲಾಗಿದೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ಪಟ್ಟಣದ ಹೊರವಲಯದಲ್ಲಿರುವ ಹೌಸಿಂಗ್ ಬೋರ್ಡ್ ಬಳಿಯ ಕೈಗಾರಿಕಾ ಪ್ರದೇಶಕ್ಕೆ 19.5 ಲಕ್ಷ ರೂ. ವೆಚ್ಚದಲ್ಲಿ ಯುಜಿ ಕೇಬಲ್ ಅಳವಡಿಕೆ ಕಾರ್ಯಕ್ಕೆ ಭೂಮಿಪೂಜೆ ನೇರವೇರಿಸಿ ಮಾತನಾಡಿ, ಗುಣಮಟ್ಟದ ವಿದ್ಯುತ್ ಸರಬರಾಜು ಮಾಡುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಂಡಿದ್ದು, ಪರಿವರ್ತಕ ಖಾಯಂ ಅಳವಡಿಕೆಗೆ 2 ಕೋಟಿ ರೂ. ವೆಚ್ಚದಲ್ಲಿ ಕಟ್ಟಡಗಳ ನಿರ್ಮಾಣ, ಆದ್ಯತೆ ಮೇರೆಗೆ 25 ಕೋಟಿ ರೂ. ವೆಚ್ಚದಲ್ಲಿ 50 ಲಿಂಕ್ ಲೈನ್ ನಿರ್ಮಾಣ, ಕಲ್ಕೆರೆ ಬಳಿ 220 ಕೆವಿ ರಿಸೀವಿಂಗ್ ಕೇಂದ್ರದ ಸ್ಥಾಪಿತವಾಗಲಿದೆ. ಮುಂದಿನ ಎರಡು ತಿಂಗಳೊಳಗೆ ಟೆಂಡರ್ ಪ್ರಕ್ರಿಯೆ ಮುಗಿದು ಕಾಮಗಾರಿ ಆರಂಭವಾಗಲಿದೆ ಎಂದರು.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಹಾಯಧನ ಅಡಿಯಲ್ಲಿ ರೈತರಿಗೆ ಹೆಚ್ಚು ಅನುಕೂಲವಾಗುವ ಸೌರ ವಿದ್ಯುತ್ ಪಡೆಯುವ ಕುಸುಮ್ ಬಿ ಯೋಜನೆಗೆ ತಾಲೂಕಿನಲ್ಲಿ 400 ರೈತರ ನೊಂದಣಿಯಾಗಿದೆ. ಹೆಚ್ಚು ಪ್ರಚಾರದ ಸಲುವಾಗಿ ಉತ್ತಮ ನೊಂದಣಿಯಾಗಿದೆ. ನೊಂದಣಿ ಅವಕಾಶವನ್ನು ಮತ್ತಷ್ಟು ದಿನಗಳ ವಿಸ್ತರಣೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಕ್ಕೆ ಮನವಿ ಮಾಡಲಾಗುವುದು, ಸೌರ ವಿದ್ಯುತ್‌ನಿಂದ ನೀರೆತ್ತುವ ಯೋಜನೆ ಅನುಷ್ಠಾನಕ್ಕೆ 7.5 ಹೆಚ್.ಪಿ.ಗೆ ರೈತರು 81ಸಾವಿರ ಹಣ ಕಟ್ಟಿದ್ದಲ್ಲಿ ಸೋಲಾರ ಪ್ಯಾನಲ್, ಪೈಪ್ ಸೇರಿ ಅಗತ್ಯ ಸೌಲಭ್ಯವನ್ನು ಇಲಾಖೆ ಒದಗಿಸುತ್ತದೆ ಎಂದರು.

ಚನ್ನರಾಯಪಟ್ಟಣ ನಗರ ಮತ್ತು ಶ್ರವಣಬೆಳಗೊಳಕ್ಕೆ ಸಂಪೂರ್ಣ ಯುಜಿ ಕೇಬಲ್ ಅಳವಡಿಕೆಗೆ ಇಂಧನ ಇಲಾಖೆಗೆ ಪ್ರಸ್ತಾಪ ಸಲ್ಲಿಸಿದ್ದು, ಮೊದಲ ಹಂತದಲ್ಲಿ ಶ್ರವಣಬೆಳಗೊಳಕ್ಕೆ ಅವಕಾಶ ಮಾಡಿಕೊಡುವುದಾಗಿ ಇಲಾಖೆ ಸೂಚಿಸಿದೆ ಎಂದ ಅವರು, ಇಲ್ಲಿನ ಕೈಗಾರಿಕಾ ಪ್ರದೇಶಕ್ಕೆ ರಸ್ತೆ ನಿರ್ಮಿಸಲಾಗಿದ್ದು, ವಾರಕ್ಕೆರೆಡು ಬಾರಿ ಪುರಸಭೆಯಿಂದ ಸ್ವಚ್ಛತೆಗೆ ಸೂಚಿಸಲಾಗುವುದು, ಕೈಗಾರಿಕಾ ಇಲಾಖೆಯಲ್ಲಿ ಅನುದಾನ ಕೊರತೆ ಹಿನ್ನಲೆ ಮುಂದಿನ ಆರ್ಥಿಕ ವರ್ಷದಲ್ಲಿ ಕಾಪೌಂಡ್ ನಿರ್ಮಾಣದ ಬೇಡಿಕೆ ಪೂರೈಸಲಾಗುವುದು ಎಂದರು.

ಸೆಸ್ಕ್‌ನ ಕಾರ್ಯಪಾಲಕ ಅಭಿಯಂತರರಾದ ರತ್ನ, ಸಹಾಯಕ ಕಾರ್ಯಪಾಲಕ ಅಭಿಯಂತರ ಕೃಷ್ಣ, ಸಹಾಯಕ ಅಭಿಯಂತರ ಹರೀಶ್ ಇತರರಿದ್ದರು.

# ದೇಶ ಸುತ್ತು-ಕೋಶ ಓದು ಮಾತು ಸಾರ್ವಕಾಲಿಕ ಸತ್ಯ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ದೇಶ ಸುತ್ತು ಕೋಶ ಓದು ಎಂಬ ಹಿರಿಯರ ಮಾತು ಸರ್ವಕಾಲಕ್ಕೂ ಸತ್ಯ ಎಂದು ಶಿಕ್ಷಣ ಸುಧಾರಣಾ ಸಮಿತಿಯ ಸದಸ್ಯ ವೈ. ಕೆ. ದೇವರಾಜ್ ಹೇಳಿದರು.

ಕರ್ನಾಟಕ ದರ್ಶನ ಯೋಜನೆಯಡಿ ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ಪ್ರವಾಸೋದ್ಯಮ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳಿಗೆ ಆಯೋಜಿಸಿರುವ ಉತ್ತರ ಕರ್ನಾಟಕದ ಐತಿಹಾಸಿಕ ಸ್ಥಳಗಳು ಮತ್ತು ಪ್ರವಾಸಿ ತಾಣಗಳ ವೀಕ್ಷಣೆಗೆ ತೆರಳಿದ ಶಾಲಾ ಮಕ್ಕಳಿಗೆ ಶುಭ ಕೋರಿ ಮಾತನಾಡಿ, ಪಠ್ಯ ಪುಸ್ತಕದ ಶಿಕ್ಷಣ ನಮ್ಮ ಜ್ಞಾನಾರ್ಜನೆಯನ್ನು ಹೆಚ್ಚಿಸಿದರೆ ಪಠ್ಯೇತರ ವಿಷಯಗಳ ಬಗ್ಗೆ ಆಸಕ್ತಿ ಬೆಳೆಸಿಕೊಳ್ಳುವುದು ಮತ್ತು ಖುದ್ದು ವೀಕ್ಷಿಸಿ ವಾಸ್ತವಂಶ ತಿಳಿದುಕೊಳ್ಳುವುದರಿಂದ ಭವಿಷ್ಯದಲ್ಲಿ ನಮ್ಮ ಬದುಕು ವಿಕಾಸಗೊಳಲು ಸಹಕಾರಿಯಾಗುತ್ತದೆ ಎಂದರು.

ಶಿಕ್ಷಣ ಸಂಯೋಜಕ ವೈ.ಸಿ. ಮಲ್ಲೇಶ್ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಕರ್ನಾಟಕ ದರ್ಶನ ಯೋಜನೆ ಅಡಿ ನಾಲ್ಕು ದಿನಗಳ ಪ್ರವಾಸಕ್ಕೆ ಸರ್ಕಾರ ಅನುವು ಮಾಡಿಕೊಟ್ಟಿದ್ದು ಪ್ರವಾಸದ ವೇಳೆಯಲ್ಲಿ ಊಟ ಉಪಹಾರ ಮತ್ತು ವಸತಿ ವ್ಯವಸ್ಥೆಯನ್ನು ಸಹ ಸರ್ಕಾರ ಪೂರೈಸುತ್ತಿದ್ದು ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳುವ ಮೂಲಕ ಪ್ರವಾಸಿ ತಾಣಗಳ ವೀಕ್ಷಣೆ ಮಾಡುವ ಜೊತೆಗೆ ಪ್ರವಾಸಿ ತಾಣಗಳು ಐತಿಹಾಸಿಕ ಸ್ಮಾರಕಗಳ ಬಗ್ಗೆ ಮಾಹಿತಿ ತಿಳಿದುಕೊಂಡಿದ್ದೆ. ಆದರೆ ಭವಿಷ್ಯದಲ್ಲಿ ನಿಮ್ಮ ಈ ಪ್ರವಾಸ ಉಪಯುಕ್ತ ಎನಿಸುತ್ತದೆ ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ಬಿಆರ್‌ಸಿ ಶಂಕರ್, ಶಿಕ್ಷಣ ಸಂಯೋಜಕ ಹರೀಶ್ ಕುಮಾರ್, ಸತೀಶ್, ಗ್ರಾಮ ಪಂಚಾಯಿತಿ ಸದಸ್ಯ ಈಶ್ವರ್ ಹಾಗೂ ಇತರರಿದ್ದರು.

# ವಿಮಾನ ನಿಲ್ದಾಣ: ಭೂ ಸ್ವಾಧೀನ ಪ್ರಕ್ರಿಯೆ ಚುರುಕುಗೊಳಿಸಲು ಸೂಚನೆ

## ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ನವೀನ್ ರಾಜ್ ಸಿಂಗ್ | ಅಧಿಕಾರಿಗಳ ಸಭೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಹಾಸನ: ಹಾಸನ ವಿಮಾನ ನಿಲ್ದಾಣ ಕಾಮಗಾರಿಗೆ ಬಾಕಿ ಇರುವ ಭೂಸ್ವಾಧೀನ ಪ್ರಕ್ರಿಯೆ ಶೀಘ್ರವಾಗಿ ಪೂರ್ಣಗೊಳಿಸಿ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ನವೀನ್ ರಾಜ್ ಸಿಂಗ್ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ವಿಮಾನ ನಿಲ್ದಾಣ ಕಾಮಗಾರಿ ಹಾಗೂ ರಾಷ್ಟ್ರೀಯ ಹೆದ್ದಾರಿ-206 ಯೋಜನೆಗೆ ಸಂಬಂಧಿಸಿದಂತೆ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನೆ ಸಭೆಯಲ್ಲಿ ಮಾತನಾಡಿ, ವಿಮಾನ ನಿಲ್ದಾಣಕ್ಕೆ ಸಂಪರ್ಕಿಸುವ ರಸ್ತೆ ನಿರ್ಮಾಣಕ್ಕೆ ಅಗತ್ಯವಿರುವ ಜಾಗವನ್ನು ಭೂಸ್ವಾಧೀನಪಡಿಸಿಕೊಂಡು ರೈತರಿಗೆ ಪರಿಹಾರ ಮೊತ್ತ ಪಾವತಿಸಿ ರಸ್ತೆ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ಕೈಗೊಳ್ಳುವಂತೆ ಅಧಿಕಾರಿಗಳಿಗೆ ತಿಳಿಸಿದರು.


ಕೆಐಎಡಿಬಿ ವತಿಯಿಂದ ಒಟ್ಟು 91 ಎಕರೆ 32 ಗುಂಟೆ ಭೂಸ್ವಾಧೀನಪಡಿಸಿಕೊಂಡಿರುವ ಪ್ರಕರಣಕ್ಕೆ ಸಂಬಂಧಿಸಿ, ರೈತರಿಗೆ ಪರಿಹಾರದ ಮೊತ್ತ ಪಾವತಿಸಲು ಒಟ್ಟು 143.67 ಕೋಟಿ ರೂ. ಅನುದಾನ ಬಿಡುಗಡೆಗೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಮಾತನಾಡಿ ತ್ವರಿತವಾಗಿ ಕ್ರಮ ವಹಿಸಲಾಗುವುದು. ಭೂಸ್ವಾಧೀನ ಪ್ರಕ್ರಿಯೆ ಬಾಕಿ ಇರುವ ಜಮೀನಿಗೆ ಸಂಬಂಧಿಸಿದಂತೆ ದರ ನಿಗದಿ ಸಮಿತಿಯ ಮುಂದಿಟ್ಟು ಕೂಡಲೇ ಸಭೆ ನಡೆಸಿ ದರ ನಿಗದಿಪಡಿಸುವ ಜೊತೆಗೆ ಜಂಟಿ ಸರ್ವೇ ಕಾರ್ಯವನ್ನು ನಡೆಸುವಂತೆ ನಿರ್ದೇಶನ ನೀಡಿದರು.

ವಿಮಾನ ನಿಲ್ದಾಣ ಕಾಮಗಾರಿಗೆ ಭೂಸ್ವಾಧೀನಪಡಿಸಿಕೊಂಡಿರುವ ಜಮೀನುಗಳಲ್ಲಿ ಹಾದುಹೋಗಿರುವ ಹೈಟೆನ್ಶನ್ ವಿದ್ಯುತ್ ಲೈನ್ ಸ್ಥಳಾಂತರಕ್ಕೆ ತುರ್ತಾಗಿ ಕ್ರಮ ವಹಿಸಬೇಕು. ಅರಸೀಕೆರೆ ತಾಲ್ಲೂಕಿನ ಬೆಂಡೆಕೆರೆ ಗ್ರಾಮದಲ್ಲಿ ರಾಷ್ಟ್ರೀಯ ಹೆದ್ದಾರಿ-206 ಯೋಜನೆಗೆ ಸಂಬಂಧಿಸಿದಂತೆ ರೈತರ ಮನವೊಲಿಸಿ ಕಾಮಗಾರಿ ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಮಾತನಾಡಿ, ಹಾಸನ ವಿಮಾನ ನಿಲ್ದಾಣ ದಕ್ಷಿಣ ಭಾಗದಲ್ಲಿ ದ್ಯಾವಲಾಪುರ ತಂಗಾಡಿಹಳ್ಳಿ ಗ್ರಾಮದ ಸಂಪರ್ಕ ರಸ್ತೆಯನ್ನು ನಿರ್ಮಾಣ ಮಾಡಿಕೊಡುವಂತೆ ಹಾಗು ತಾತ್ಕಾಲಿಕವಾಗಿ ಮಣ್ಣಿನ ರಸ್ತೆಯನ್ನು ನಿರ್ಮಾಣ ಮಾಡಿಕೊಡಲು ಮನವಿ ಸಲ್ಲಿಸಿದ್ದಾರೆ. ವಿದ್ಯುತ್ ಗೋಪುರ ಹಾದು ಹೋಗುವ ಮಾರ್ಗಗಳ ಜಮೀನಿಗೆ ದರ ನಿಗದಿ ಮಾಡಿ ಈಗಾಗಲೇ ಆದೇಶ ಮಾಡಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್. ಪೂರ್ಣಿಮಾ, ಮೈಸೂರು ಕೆಐಎಡಿಬಿ ಭೂಸ್ವಾಧೀನಾಧಿಕಾರಿ ವೆಂಕಟರಾಜು, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ, ಶ್ರೀನಿಧಿ, ಭೂದಾಖಲೆಗಳ ಇಲಾಖೆಯ ಉಪನಿರ್ದೇಶಕ ಹೇಮಲತಾ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಇಂಜಿನೀಯರ್ ಗಿರೀಶ್ ಮತ್ತಿತರರು ಹಾಜರಿದ್ದರು.

# ಮೆಕ್ಕೆಜೋಳ ವಹಿವಾಟು ವ್ಯತ್ಯಾಸ ಪಾವತಿಗೆ ಕ್ರಮ



ಹಾಸನ: ಮೆಕ್ಕೆಜೋಳ ವಹಿವಾಟಿನ ಆಧಾರದ ಮೇಲೆ ರೈತರಿಗೆ ವ್ಯತ್ಯಾಸದ ಮೊತ್ತ ಪಾವತಿಗಾಗಿ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ನೋಂದಣಿ ಕೇಂದ್ರ ಸ್ಥಾಪನೆಗೆ ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಯಡಿ 2025-26ನೇ ಸಾಲಿನಲ್ಲಿ ಮೆಕ್ಕೆ ಜೋಳದ ಧಾರಣೆಗೆ ನಿಯಂತ್ರಿತ ಮಾರುಕಟ್ಟೆಗಳಲ್ಲಿ ಆಗುವ ವಹಿವಾಟಿನ ಆಧಾರದ ಮೇಲೆ ರೈತರಿಗೆ ವ್ಯತ್ಯಾಸದ ಮೊತ್ತವನ್ನು ಪಾವತಿಸುವ ಕುರಿತು ನಡೆದ ಸಭೆಯಲ್ಲಿ ಮಾತನಾಡಿ, ಸರ್ಕಾರದ ಆದೇಶದಂತೆ ಕ್ವಿಂಟಾಲ್‌ಗೆ 2,150 ರೂ. ಕಡಿಮೆ ದರದಲ್ಲಿ ಮಾರಾಟವಾದಲ್ಲಿ ವ್ಯತ್ಯಾಸದ ಮೊತ್ತ ಪಾವತಿಯ ವೇಳೆಯಲ್ಲಿ ಯಾವುದೇ ಲೋಪವಾಗದಂತೆ ಕ್ರಮ ಕೈಗೊಳ್ಳಬೇಕು. ಕೃಷಿ ಇಲಾಖೆಯಿಂದ ಗುಣಮಟ್ಟ ಪರಿಶೀಲನೆಗೆ ತಾಂತ್ರಿಕ ಅಧಿಕಾರಿಗಳನ್ನು ನೇಮಕ ಮಾಡಬೇಕು ಎಂದರು.

# ಇತಿಹಾಸದಲ್ಲಿ ಈ ದಿನ

## ಜನವರಿ-09

1799: ಬ್ರಿಟಿಷ್ ಪ್ರಧಾನಿ ವಿಲಿಯಂ ಪಿಟ್ (ಕಿರಿಯ) ಆದಾಯ ತೆರಿಗೆ ವ್ಯವಸ್ಥೆಯನ್ನು ಪರಿಚಯಿಸಿದರು.
1908: ಭಾರತೀಯ ಕ್ರಾಂತಿಕಾರಿ ಖುದಿರಾಮ್ ಬೋಸ್ ಅವರನ್ನು ಬ್ರಿಟಿಷ್ ಸರ್ಕಾರ ಮರಣದಂಡನೆ ವಿಧಿಸಿತು.
1920: ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ಅಧಿವೇಶನದಲ್ಲಿ ಅಸಹಕಾರ ಚಳವಳಿಗೆ ಅಧಿಕೃತ ರೂಪ ನೀಡಲಾಯಿತು.
1946: ಯುಎನ್‌ನ ಮೊದಲ ಸಾಮಾನ್ಯ ಸಭೆ ಲಂಡನ್‌ನಲ್ಲಿ ಆರಂಭವಾಯಿತು.
1970: ಕಾಂಕಾರ್ಡ್ ಸೂಪರ್‌ಸಾನಿಕ್ ವಿಮಾನ ಮೊದಲ ವಾಣಿಜ್ಯ ಹಾರಾಟ ನಡೆಸಿತು.


### ಜನನ

1890: ಖುದಿರಾಮ್ ಬೋಸ್, ಭಾರತೀಯ ಸ್ವಾತಂತ್ರ್ಯ ಹೋರಾಟಗಾರ
1935: ಡಾ. ರಂಜೀತ್ ಗುಹಾ, ಖ್ಯಾತ ಇತಿಹಾಸಕಾರ (ಸಬ್‌ಆಲ್ಟರ್ನ್ ಅಧ್ಯಯನ ಸ್ಥಾಪಕ)

### ನಿಧನ

1992: ವಸಂತ್ ದತ್ತಾತ್ರೇಯ ಗುಜರಾಲ್, ಸಮಾಜ ಸೇವಕ
2014: ಅಮೃತ್ ಲಾಲ್ ನಾಗರ್, ಪ್ರಸಿದ್ಧ ಹಿಂದಿ ಸಾಹಿತ್ಯಕಾರ

# ಕಾಡಾನೆಗಳ ದಾಳಿಗೆ ಬೆಳೆ ಯಂತ್ರೋಪಕರಣ ನಾಶ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ತಾಲ್ಲೂಕಿನ ಅರೇಹಳ್ಳಿ ಹೋಬಳಿ ತೊಳಲು ಗ್ರಾಮದ ಮಧುಕರ್ ಎಂಬುವರ ತೋಟದಲ್ಲಿ 15ಕ್ಕೂ ಹೆಚ್ಚು ಕಾಡಾನೆಗಳ ಹಿಂಡು ದಾಳಿ ಮಾಡಿ ಕಾಫಿ, ಅಡಿಕೆ ಹಾಗೂ ಯಂತ್ರೋಪಕರಣಗಳನ್ನು ಹಾಳು ಮಾಡಿವೆ.

ಮಲೆನಾಡು ಭಾಗದಲ್ಲಿ ಕಾಡಾನೆಗಳ ಹಾವಳಿ ನಿರಂತರವಾಗಿ ಮುಂದುವರೆಯುತ್ತಿದ್ದು ಬೆಳೆಗಾರರು ಕಷ್ಟಪಟ್ಟು ಬೆಳೆದ ಕಾಫಿ, ಅಡಿಕೆ, ಬಾಳೆ ಗಿಡಗಳನ್ನು ತುಳಿದು ಹಾಳು ಮಾಡುತ್ತಿವೆ. ಕಾಫಿ ತೋಟಕ್ಕೆ ನೀರು ಹಾಯಿಸಲು ಜೋಡಿಸಿರುವ ಪೈಪ್, ಪಂಪ್‌ಸೆಟ್ ಇತರೆ ಉಪಕರಣಗಳನ್ನು ತುಳಿದು ಹಾಕುತ್ತಿವೆ. ತೋಟದ ರಕ್ಷಣೆಗಾಗಿ ಅಳವಡಿಸಿದ್ದ ಗೇಟ್ ಕಿತ್ತು ಬಿಸಾಡುತ್ತಿವೆ. ಅರೆಹಳ್ಳಿ, ಬಿಕ್ಕೋಡು ಭಾಗದಲ್ಲಿ ಕಾಣಿಸಿಕೊಳ್ಳುತ್ತಿದ್ದ ಕಾಡಾನೆಗಳು ಈಗ ಚೀಕನಹಳ್ಳಿ, ತೊಳಲು ಭಾಗಕ್ಕೂ ಲಗ್ಗೆ ಹಾಕಿರುವುದರು ಬೆಳೆಗಾರರನ್ನು ಕಂಗೆಡಿಸಿದೆ.

ತೋಟದ ಮಾಲೀಕ ಮಧುಕರ್ ಮಾತನಾಡಿ, ಕಾಡಾನೆಗಳು ತೋಟದೊಳಗೆ ನುಗ್ಗಿ ಬೆಳೆಗಳನ್ನು ನಾಶ ಮಾಡಿವೆ. ಕಳೆದ ವರ್ಷ 200ಕ್ಕೂ ಹೆಚ್ಚು ಕಾಫಿ ಗಿಡಗಳನ್ನು ನೆಡಲಾಗಿತ್ತು. ಆನೆಗಳು ಅವುಗಳ ಮೇಲೆ ನಡೆದಾಡಿ ತುಳಿದು ಹಾಕಿವೆ. ಅಲ್ಲದೆ ಫಸಲಿಗೆ ಬಂದ ಕಾಫಿ, ಅಡಿಕೆ ಬೆಳೆಗಳನ್ನು ಹಾಳು ಮಾಡಿದೆ. ನೀರು ಹಾಯಿಸಲು ಹೊಸದಾಗಿ ಅಳವಡಿಸಿದ್ದ ಸ್ಪ್ರಿಂಕ್ಲೆರ್‌ಗಳನ್ನು ತಳಿದು ಮರಿದು ಹಾಕಿವೆ. ಕಾಡಾನೆಗಳಿಗೆ ಹೆದರಿ ಕೂಲಿ ಕಾರ್ಮಿಕರು ಕೆಲಸಕ್ಕೆ ಬರುತ್ತಿಲ್ಲ. ಈಗ ಕಾಫಿ ಹಣ್ಣು ಕೊಯ್ಲು ಸಮಯವಾಗಿದ್ದು ಕಾರ್ಮಿಕರಿಲ್ಲದೆ ಪರದಾಡುವಂತಾಗಿದೆ. ಆನೆಗಳ ದಾಳಿಯಿಂದ ಲಕ್ಷಾಂತರರೂ. ನಷ್ಟ ಸಂಭವಿಸಿದೆ. ಅರಣ್ಯ ಇಲಾಖೆ ಅಧಿಕಾರಿಗಳು ಪರಿಶೀಲನೆ ನಡೆಸಿ ಪರಿಹಾರ ದೊರಕಿಸಿಕೊಡಬೇಕೆಂದು ಆಗ್ರಹಿಸಿದ್ದಾರೆ.

ಇದಲ್ಲದೇ ತಾಲ್ಲೂಕಿನ ಪಿಂಟೋ ಅವರ ತೋಟ ಕಣಗುಪ್ಪೆ, ಕಾನಹಳ್ಳಿ ಫಾರೆಸ್ಟ್ ಕಾನಹಳ್ಳಿ, ನಿಯರ್ ತಾರಾನಾಥ್ ಅವರ ತೋಟ ಸುತ್ತಮುತ್ತ ಕಾಡಾನೆಗಳು ಕಾಣಿಸಿಕೊಂಡಿವೆ. ಸಕಲೇಶಪುರ ತಾಲ್ಲೂಕಿನ ಹೆತ್ತೂರು, ಯಸಳೂರು ಹೋಬಳಿ ವ್ಯಾಪ್ತಿಯ ಜೇಡಿಗದ್ದೆ ಗ್ರಾಮದ ಹೊಳೆಸಾಲು, ದುಂಬಿಕಲ್ಲು ಹೋಂ ಸ್ಟೇ, ಕುಮಾರ್ ಅವರ ತೋಟ, ಕಿರ್ಕಳ್ಳಿ ಗ್ರಾಮದ ಒಂಟಿಗದ್ದೆ, ಮರಗತ್ತೂರು ಬೆಟ್ಟ, ಹಾಡ್ಯ ಗ್ರಾಮದ ಕಾರೆ ಕುರಾವ್, ಬಟ್ಟೆ ಕುಮಾರಿ ಮತ್ತು ಬಾಳೆಹಳ್ಳ, ಮತ್ತೂರು ಗ್ರಾಮದ ನೀಲಗಿರಿ ನಡುತೋಪು ಸುತ್ತಮುತ್ತ ಕಾಡಾನೆಗಳ ಸಂಚಾರ ಕಂಡುಬಂದಿದೆ.

# ಮ್ಯಾಗ್ನೆಟ್ ಶಾಲೆಗೆ ಎಐಡಿಎಸ್ಓ ವಿರೋಧ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಕೆಪಿಎಸ್ ಮ್ಯಾಗ್ನೆಟ್ ಹೆಸರಿನಲ್ಲಿ ಸರ್ಕಾರಿ ಶಾಲೆಗಳ ವಿಲೀನ ವಿರೋಧಿಸಿ ಎಐಡಿಎ ನೇತೃತ್ವದಲ್ಲಿ ತಾಲ್ಲೂಕಿನ ಸೊಪ್ಪಿನಹಳ್ಳಿ ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ಸಂಘಟನೆ ಜಿಲ್ಲಾ ಕಾರ್ಯದರ್ಶಿ ಸುಷ್ಮಾ ಮಾತನಾಡಿ, ಸರ್ಕಾರಿ ಶಾಲೆಗಳನ್ನು ಮುಚ್ಚುವ ಮೂಲಕ ಸರ್ಕಾರ ಬಡ-ರೈತ - ಕೂಲಿ ಕಾರ್ಮಿಕರ ಮಕ್ಕಳನ್ನು ಶಿಕ್ಷಣದಿಂದ ವಂಚಿತರನ್ನಾಗಿಸಿ, ಸಾರ್ವಜನಿಕ ಶಿಕ್ಷಣವನ್ನು ಸಂಪೂರ್ಣವಾಗಿ ಖಾಸಗಿಕರಣ ಮಾಡಲು ಹೊರಟಿದೆ. ಸೊಪ್ಪಿನಹಳ್ಳಿ ಗ್ರಾಮದ ಶಾಲೆಯಲ್ಲಿ 16 ಮಕ್ಕಳು ಓದುತ್ತಿದ್ದಾರೆ. ಇವರೆಲ್ಲರೂ ಸಂಪೂರ್ಣವಾಗಿ ಸರ್ಕಾರಿ ಶಾಲೆಯ ಮೇಲೆ ಅವಲಂಬಿತರಾಗಿದ್ದಾರೆ. ಈ ಶಾಲೆ ಮುಚ್ಚಿದರೆ ಮಕ್ಕಳ ಭವಿಷ್ಯದ ಬಾಗಿಲು ಮುಚ್ಚಿದಂತೆ ಎಂದು ಆತಂಕ ವ್ಯಕ್ತಪಡಿಸಿದರು.

ಇತ್ತೀಚೆಗೆ ಹೊರಡಿಸಲಾದ ಸರ್ಕಾರದ ಹೊಸ ಆದೇಶವು ಕೌಶಲ್ಯಾಧಾರಿತ ಶಿಕ್ಷಣ ನೀಡುವ ಮೂಲಕ ಸರ್ಕಾರಿ ಶಾಲೆಯಲ್ಲಿ ಓದುವ ಮಕ್ಕಳಿಗೆ ದೀಪ ಮತ್ತು ಹಣತೆ ಮಾಡಲು, ಅಡಿಕೆ ಕಾಯಿ ಬಿಡಿಸುವುದು ಸೇರಿ ಇತ್ಯಾದಿ ತರಬೇತಿ ನೀಡುತ್ತಾ ಸರ್ಕಾರಿ ಶಾಲೆ ಮಕ್ಕಳನ್ನು ಉನ್ನತ ಶಿಕ್ಷಣದಿಂದ ದೂರ ಉಳಿಯುವಂತೆ ಹಾಗು ಬಡ ಕುಟುಂಬದ ಮಕ್ಕಳನ್ನು ಬಾಲ ಕಾರ್ಮಿಕರಾಗಿಸುವ ಸಂಚನ್ನು ಕಾನೂನಾತ್ಮಕವಾಗಿ ಕೆಪಿಎಸ್ ಮ್ಯಾಗ್ನೆಟ್ ಯೋಜನೆಯ ಮೂಲಕ ಅನುಷ್ಠಾನಕ್ಕೆ ತರುತ್ತಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳನ್ನು ಉನ್ನತೀಕರಿಸಲು ಬಳಸಲಾಗುತ್ತಿರುವ ಕಲ್ಯಾಣ ಕರ್ನಾಟಕದ ಕೆ.ಕೆ.ಆರ್.ಡಿ.ಬಿ ಮತ್ತು ಗಣಿ ಬಾಧಿತ ಪ್ರದೇಶದ ಅಭಿವೃದ್ಧಿ ನಿಧಿಗೆ ಕುತ್ತು ತಂದಿದೆ ಮತ್ತು ಏಶಿಯನ್ ಡೆವಲಪ್ಮೆಂಟ್ ಬ್ಯಾಂಕ್‌ನಿಂದ 2,500 ಕೋಟಿ ರೂ. ಸಾಲವನ್ನು ತೆಗೆದುಕೊಳ್ಳುವ ಮೂಲಕ ಸರ್ಕಾರಿ ಸಂಸ್ಥೆಗಳ ಸಂಖ್ಯೆಯನ್ನು ಇಳಿಮುಖಗೊಳಿಸುತ್ತಾ, ಬಡ ಜನಗಳ ಹೊರೆಯನ್ನು ಇನ್ನು ಹೆಚ್ಚು ಮಾಡಲು ಮುಂದಾಗಿದೆ ಎಂದು ಆರೋಪಿಸಿದರು.

ಗ್ರಾಮಸ್ಥರು ಒಕ್ಕೊರಲಿನಿಂದ ನಮ್ಮೂರ ಸರ್ಕಾರಿ ಶಾಲೆ ಕೇವಲ ಶಾಲೆ ಮಾತ್ರವಲ್ಲ, ಇದು ಮಕ್ಕಳ ಭವಿಷ್ಯ ಹಾಗೂ ಗ್ರಾಮದ ಅಸ್ತಿತ್ವ ಎಂದು ಆಗ್ರಹಿಸಿದರು. ನಮ್ಮ ಊರಿನಲ್ಲಿ ಸಾರ್ವಜನಿಕ ಸಂಸ್ಥೆ ಎಂದರೆ ಅದು ಶಾಲೆ ಮಾತ್ರ, ಇದಕ್ಕೂ ಬೀಗ ಬಿದ್ದರೆ ನಮ್ಮೂರಿನಲ್ಲಿ ಸಾಮಾಜಿಕ ವಾತಾವರಣವನ್ನೇ ಕಳೆದುಕೊಂಡಂತೆ. ಎಂತಹ ಸಂದರ್ಭ ಬಂದರೂ ಕೂಡ ನಾವು ನಮ್ಮ ಶಾಲೆಯನ್ನು ಉಳಿಸಿಕೊಳ್ಳಲು ಸಿದ್ಧರಿರುತ್ತೇವೆ ಎಂದರು.

# ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಬೀದಿ ನಾಟಕ ಪ್ರದರ್ಶನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಏಕತಾ ಶಿಬಿರದ ಶಿಬಿರಾರ್ಥಿಗಳಿಂದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಸಾರ್ವಜನಿಕ ಜಾಗೃತಿ ಸಲುವಾಗಿ ಆಯೋಜಿಸಿದ್ದ ನಾಟಕ ಪ್ರದರ್ಶನವನ್ನು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ನವೀನ್ ರಾಜ್ ಸಿಂಗ್, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ವೀಕ್ಷಿಸಿದರು.

ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಮಾತನಾಡಿ, ಹಿಮ್ಸ್ ಕಾಲೇಜಿನಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಏಕತಾ ಶಿಬಿರಕ್ಕೆ ಅನೇಕ ರಾಜ್ಯಗಳಿಂದ 200ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿ ಶಿಬಿರವನ್ನು ಪ್ರತಿನಿಧಿಸಿದ್ದಾರೆ ಎಂದು ತಿಳಿಸಿದರು. ಇದು ರಾಷ್ಟ್ರೀಯ ಏಕೀಕರಣ ಶಿಬಿರವಾಗಿದ್ದು, ಹಿಮ್ಸ್ ಸಂಸ್ಥೆಗೆ ಸಿಕ್ಕಿರುವ ಅವಕಾಶ, ನಮ್ಮ ಜಿಲ್ಲೆಗೆ ಹೆಮ್ಮೆ ತರುವ ಕಾರ್ಯಕ್ರಮ. ಭಾರತ ದೇಶ ತುಂಬಾ ವೈವಿಧ್ಯಮಯವಾಗಿದ್ದು, ವೈವಿಧ್ಯತೆಯಲ್ಲಿಯೂ ಭಾವನೆಗಳನ್ನು ಹೊಂದಿರುವ ದೇಶವಾಗಿದೆ ಎಂದರು.



Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248